ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149  🖷: 08224-256051  jsscwk@gmail.com  www. jsscwkgl.org

ಕೊಳ್ಳೇಗಾಲ 16.9.2025 ರಂದು ಯೂತ್ ರೆಡ್ ಕ್ರಾಸ್ ಘಟಕದ ವತಿಯಿಂದ ಆರೋಗ್ಯ ತಪಾಸಣೆ ಹಮ್ಮಿಕೊಳ್ಳಲಾಗಿತ್ತು. ಜೆಎಸ್‌ಎಸ್ ಆಸ್ಪತ್ರೆ ಸಿಬ್ಬಂದಿ ವರ್ಗದವರು ನಮ್ಮ ಕಾಲೇಜಿನ ವಿದ್ಯಾರ್ಥಿಗಳಿಗೆ ಆರೋಗ್ಯ ತಪಾಸಣೆ ಮಾಡಿ ಆರೋಗ್ಯದ ಬಗ್ಗೆ ಅರಿವು ಮೂಡಿಸಿದರು.

ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ, ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯದಿಂದ ಆಗಮಿಸಿದ್ದ ವೈದ್ಯರು ಉತ್ತಮ ಆಹಾರವನ್ನು ನಾವು ಸೇವಿಸದೇ ಹೋದರೆ ಅನಾರೋಗ್ಯಕ್ಕೆ ತುತ್ತಾಗುವುದರಿಂದ ನಮ್ಮ ದಿನನಿತ್ಯದ ಆಹಾರದಲ್ಲಿ ಹಣ್ಣು, ತರಕಾರಿ ನಾರು ಪದಾರ್ಥಗಳನ್ನು ಹೆಚ್ಚಾಗಿ ಬಳಸಬೇಕು. ಇದರಿಂದ ಮಧುಮೇಹ, ಎದೆನೋವು, ರಕ್ತದೊತ್ತಡ ಇತರೆ ಖಾಯಿಲೆಗಳಿಂದ ದೂರವಿರಬಹುದು ಎಂದು ತಿಳಿಸಿದರು.

ವಿದ್ಯಾರ್ಥಿಗಳು ಅನವಶ್ಯಕ ಮೊಬೈಲ್ ಫೋನ್ ಬಳಕೆಗೆ ಹೆಚ್ಚು ಗಮನ ನೀಡುವುದನ್ನು ನಿಲ್ಲಿಸಿ ವಿದ್ಯಾಭ್ಯಾಸದ ಕಡೆಗೆ ಗಮನ ಹರಿಸಬೇಕೆಂದು ಸಲಹೆ ನೀಡಿದರು. ಶುಚಿತ್ವಕ್ಕೆ ಹೆಚ್ಚಿನ ಆದ್ಯತೆ ನೀಡಬೇಕಾಗಿ ತಿಳಿಸಿದರು.

ಸುಮಾರು 400 ವಿದ್ಯಾರ್ಥಿಗಳಿಗೆ ಹಾಗೂ ಸಿಬ್ಬಂದಿ ವರ್ಗದವರಿಗೂ ಆರೋಗ್ಯ ತಪಾಸಣೆ ಮಾಡಲಾಯಿತ್ತು.




ಜೆಎಸ್‌ಎಸ್ ಆಸ್ಪತ್ರೆ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿಗಳಿಗೆ ಆರೋಗ್ಯ ತಪಾಸಣೆ ಮಾಡುತ್ತಿರುವುದು.

